2

ಕರ್ನಾಟಕ ಸರ್ಕಾರ

ಮಕ್ಕಳ ರಕ್ಷಣಾ ನಿರ್ದೇಶನಾಲಯ

ಸಂಖ್ಯೆ:ಕೆಎಸ್‌ಐಸಿಪಿಎಸ್/ನೋಂ/ಸುತ್ತೋಲೆ-1/2021-22 ಮಕ್ಕಳ ರಕ್ಷಣಾ ನಿರ್ದೇಶನಾಲಯ

ಬೆಂಗಳೂರು, ದಿನಾಂಕ: 15-04-2021

## ಸುತ್ತೋಲೆ

ವಿಷಯ:- ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ)ಕಾಯ್ದೆ, 2015 ರಡಿ ಈಗಾಗಲೇ ನೋಂದಣಿ ಪಡೆದಿರುವ ಮತ್ತು ನೋಂದಣಿಯ ನವೀಕರಣಗೊಂಡಿರುವ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಮತ್ತು ಹೊಸ ನೋಂದಣಿ ಮತ್ತು ನವೀಕರಣ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿರುವ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಕುರಿತು

ಉಲ್ಲೇಖ: ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ)ಕಾಯ್ದೆ, 2015 ಮತ್ತು ಬಾಲನ್ಯಾಯ(ಮಕ್ಕಳ ಪಾಲನೆ ಮತ್ತು ರಕ್ಷಣೆ) ಮಾದರಿ ನಿಯಮಗಳು,2016

******

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ,2015 ಮತ್ತು ಬಾಲನ್ಯಾಯ(ಮಕ್ಕಳ ಪಾಲನೆ ಮತ್ತು ರಕ್ಷಣೆ) ಮಾದರಿ ನಿಯಮಗಳು,2016 ರನ್ವಯ ಮಕ್ಕಳ ಪಾಲನಾ ಸಂಸ್ಥೆಗಳೆಂದು ನೋಂದಣಿಯಾಗಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಅಗ್ನಿ ಸುರಕ್ಷತಾ ವ್ಯವಸ್ಥೆಯನ್ನು ಹೊಂದಿರಲೇಬೇಕು ಮತ್ತು ಈ ಬಗ್ಗೆ ಅಗ್ನಿ ಸುರಕ್ಷತಾ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳ ಕಟ್ಟಡಗಳನ್ನು ಲೋಕೋಪಯೋಗಿ ಇಲಾಖೆಯಿಂದ ಕಟ್ಟಡ ಫಿಟ್ನೆಸ್ ಪ್ರಮಾಣ ಪತ್ರವನ್ನು ಪಡೆಯವುದು ಸಹಾ ಕಡ್ಡಾಯವಾಗಿರುತ್ತದೆ.

ಮುಂದುವರೆದು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ)ಕಾಯ್ದೆ, 2015 ರಡಿ **ಈಗಾಗಲೇ ನೋಂದಣಿ ಪಡೆದಿರುವ ಮತ್ತು ನೋಂದಣಿಯ ನವೀಕರಣಗೊಂಡಿರುವ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಸಂಬಂಧಿಸಿದಂತೆ** ಅಗ್ನಿ ಸುರಕ್ಷತಾ ಪ್ರಮಾಣ ಪತ್ರ ಮತ್ತು ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳ ಕಟ್ಟಡಗಳು ಲೋಕೋಪಯೋಗಿ ಇಲಾಖೆಯಿಂದ ಕಟ್ಟಡ ಫಿಟ್ನೆಸ್ ಪ್ರಮಾಣ ಪತ್ರವನ್ನು **ಒಂದು ವಾರದೊಳಗೆ** ಸಲ್ಲಿಸಬೇಕು ಹಾಗೂ **ಭವಿಷ್ಯದಲ್ಲಿ ಕೇಂದ್ರ ಕಛೇರಿಗೆ ಹೊಸದಾಗಿ ನೋಂದಣಿ/ನೋಂದಣಿಯ ನವೀಕರಣ ಪ್ರಮಾಣ ಪತ್ರಗಳನ್ನು ಪಡೆಯಲು ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಅಗ್ನಿ ಸುರಕ್ಷತಾ ಪ್ರಮಾಣ ಪತ್ರ ಮತ್ತು ಪಿಡಬ್ಲ್ಯೂಡಿಯವರಿಂದ ಕಟ್ಟಡ ಫಿಟ್ನೆಸ್ ಪ್ರಮಾಣ ಪತ್ರವನ್ನು ಪ್ರಸ್ತಾವನೆಯೊಂದಿಗೆ** ಲಗತ್ತಿಸಿ ಸಲ್ಲಿಸುವಂತೆ ಸೂಚಿಸಿದೆ.

15.04.2021

ನಿರ್ದೇಶಕರು

ಮಕ್ಕಳ ರಕ್ಷಣಾ ನಿರ್ದೇಶನಾಲಯ

ಬೆಂಗಳೂರು

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು

ಜಿಲ್ಲಾ ಮಕ್ಕಳ ರಕ್ಷಣಾ ಘಟಕ

30 ಜಿಲ್ಲೆಗಳು

ಪ್ರತಿಯನ್ನು:-

1. ಶಾಖಾ ರಕ್ಷಣಾ ಕಡತ/ಕಛೇರಿ ಪ್ರತಿ.